ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

ಇಲಾಖೆ / ವಿಷಯ : DEPARTMENT / SUBJECT: ಮಾನ್ಯ ಮುಖ್ಯ ಮಂತ್ರಿಗಳು

ಪತ್ರಿಕೆಯ ಹೆಸರು : NAME OF THE NEWS PAPER: ಪ್ರಜಾವಾಣಿ ದಿನಾಂಕ : DATE . 21/01/2020

# ದಾವೋಸ್‌ನಿಂದ ಬಂದ ಬಳಿಕ ಸಂಪುಟ ವಿಸ್ತರಣೆ

ಪ್ರಜಾವಾಣಿ ವಾರ್ತೆ

ಬೆಂಗಳೂರು: ದಾವೋಸ್‌ನಿಂದ ವಾಪಸ್ ಬಂದ ನಂತರ ಸಂಪುಟ ವಿಸ್ತರಣೆ ಮಾಡಲಾಗುವುದು ಎಂದು ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ಹೇಳಿದ್ದಾರೆ.

ದಾವೋಸ್‌ಗೆ ತೆರಳುವ ಮುನ್ನ ಭಾನುವಾರ ಸುದ್ದಿಗಾರರೊಂದಿಗೆ ಮಾತನಾಡಿ, 'ಹುಬ್ಬಳ್ಳಿಯಲ್ಲಿ ರಾಷ್ಟ್ರೀಯ ಅಧ್ಯಕ್ಷ ಅಮಿತ್ ಶಾ ಅವರ ಜೊತೆ ಸಂಪುಟ ವಿಸ್ತರಣೆ ಕುರಿತು ಅರ್ಧ ಗಂಟೆ ಚರ್ಚೆ ಮಾಡಿದ್ದೇನೆ. ಅವರಿಂದ ಉತ್ತಮ ಸ್ಪಂದನೆ ಸಿಕ್ಕಿದೆ. ಪ್ರವಾಸದಿಂದ ವಾಪಸ್ ಬಂದ ಎರಡು ದಿನಗಳಲ್ಲೇ ಈ ಕೆಲಸ ಮಾಡುತ್ತೇನೆ' ತಿಳಿಸಿದರು.

'ಶೃಂಗಸಭೆಯಲ್ಲಿ ವಿವಿಧ ಕಂಪನಿಗಳ 35ಕ್ಕೂ ಹೆಚ್ಚು ಮುಖ್ಯಸ್ಥರನ್ನು ಭೇಟಿಯಾಗಿ ಚರ್ಚಿಸುತ್ತೇನೆ. ರಾಜ್ಯದಲ್ಲಿ ಹೆಚ್ಚಿನ ಪ್ರಮಾಣದಲ್ಲಿ ಬಂಡವಾಳ ಹೂಡುವಂತೆ ಮನವಿ ಮಾಡುತ್ತೇನೆ. ಇದರಿಂದ ಬಂಡವಾಳ ಹೂಡಿಕೆ ಹೆಚ್ಚಲಿದ್ದು, ಯುವಕರಿಗೆ ಉದ್ಯೋಗಾವಕಾಶಗಳೂ ಸಿಗುತ್ತವೆ' ಎಂದು ಅವರು ವಿಶ್ವಾಸ ವ್ಯಕ್ತಪಡಿಸಿದರು.

ಕೈಗಾರಿಕಾ ಮತ್ತು ವಾಣಿಜ್ಯ ಸಚಿವ ಜಗದೀಶ ಶೆಟ್ಟರ್, ಹಿರಿಯ ಅಧಿಕಾರಿಗಳು ಮುಖ್ಯಮಂತ್ರಿ ಜತೆ ತೆರಳಿದರು.

2